Dt 10.06.2024.

MVC No. 316-2021
PW-1 ಶಂಕರನಾಯ್ಕ
Date: 10.06.2024.

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ ಅರ್ಜಿದಾರರ ಪರವಾಗಿಃ ಶ್ರೀ. ಸಿ.ಕೆ.ಎಸ್ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು ನಾನೇ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ಚಳ್ಳಕೆರೆ ಪೊಲೀಸ್ ಠಾಣಾ ಪ್ರಕರಣ ಸಂಖ್ಯೆ 402-2014 ರ ಪ್ರ.ವ.ವರದಿಯ ದೂರಿನ ದೋಷಾರೋಪಣಾ ಪಟ್ಟಿಯ ಸ್ಥಳ ಪಂಚನಾಮೆಯ, ವಾಹನ ತಪಾಸಣಾ ವರದಿಯ, ಎರಡು ಗಾಯದ ಪ್ರಮಾಣಪತ್ರಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ ನಿಪಿ-7 ಎಂದು ಗುರುತಿಸಲಾಯಿತು. ಐದು ಪಹಣಿ ಪತ್ರಿಕೆಗಳನ್ನು ಒಟ್ಟಾಗಿ ನಿಪಿ-8 ಎಂದು ಗುರುತಿಸಲಾಯಿತು. ಎರಡು ಕಂದಾಯ ರಸೀದಿಗಳನ್ನು ಒಟ್ಟಾಗಿ ನಿಪಿ-9 ಎಂದು ಗುರುತಿಸಲಾಯಿತು. ಎರಡು ರಸೀದಿ ಪಟ್ಟಾ ಪುಸ್ತಕಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ-10 ಎಂದು ಗುರುತಿಸಲಾಯಿತು. ಎರಡು ಬೋರ್ ವೆಲ್ ಪ್ರಮಾಣಪತ್ರಗಳನ್ನು ಒಟ್ಟಾಗಿ ನಿಪಿ-11 ಎಂದು, ಎರಡು ಬೆಳೆ ಪ್ರಮಾಣಪತ್ರಗಳನ್ನು ಒಟ್ಟಾಗಿ ನಿಪಿ-12 ಎಂದು ಗುರುತಿಸಲಾಯಿತು. ಆಸ್ಪತ್ರೆ ಹೊರರೋಗಿ ಚೀಟಿಯನ್ನು ನಿಪಿ-13 ಎಂದು, ಅದಕ್ಕೆ ಸಂಬಂಧಿಸಿದ ಒಂದು ರಸೀದಿ ಮತ್ತು ಒಂದು ಸಲಹಾ ಚೀಟಿಯನ್ನು ಕ್ರಮವಾಗಿ ನಿಪಿ-14

Dt 10.06.2024.

ಮತ್ತು ನಿಪಿ-15 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿಯಲ್ಲಿ ಕಾಣಿಸಿರುವಂತೆ ಆದೇಶವಾಗಲು ಪ್ರಾರ್ಥನೆ.

**(ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್?ಸಿ., ಚಳ್ಳಕೆರೆ.